# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಜಯಪುರ ಜಿಲ್ಲಾ ಪಂಚಾಯಿತಿ ವ್ಯಪ್ತಿಯ ಗ್ರಾಮಿಣ ಮತ್ತು ಕೈಗಾರಿಕೆ ಇಲಾಖೆಯಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ವೇತನ ಪಾವತಿಗಾಗಿ ಒದಗಿಸಿರುವ ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಆಇ 357 ಬಿ.ಆರ್.ಎಸ್ 2021 ಬೆಂಗಳೂರು ದಿ: 10.02.2022
2. ಆರ್ಥಿಕ ಇಲಾಖೆ ವೆಚ್ಚ 1 ಶಾಖೆಯ ಕಡತ ಸಂಖ್ಯೆ: ಆಇ 343 ವೆಚ್ಚ 1/2021

ಪ್ರಸ್ತಾವನೆ:

ಉಪ ನಿರ್ದೇಶಕರು (ಗ್ರಾಕೈ), ಜಿಲ್ಲಾ ಪಂಚಾಯತ್ ಕೈಗಾರಿಕಾ ವಿಭಾಗ, ವಿಜಯಪುರ ಇವರ ಕಛೇರಿಯ ಅಧೀನದಲ್ಲಿರುವ ದಿನಗೂಲಿ ನೌಕರರ ವೇತನ ಪಾವತಿಸಲು ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2851-00-107-0-27-033ಯಡಿ ರೂ.6.91ಲಕ್ಷ ಹೆಚ್ಚುವರಿ ಅನುದಾನವನ್ನು ಕಂಡಿಕೆ(1)ರ ಆದೇಶದಲ್ಲಿ ಲೆಕ್ಕ ಶೀರ್ಷಿಕೆ 2851-00-196-2-01-414ರಡಿ ಒದಗಿಸಲಾಗಿದೆ.

ಹೆಚ್ಚುವರಿಯಾಗಿ ಒದಗಿಸಿರುವ ಅನುದಾನವನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಗೆ ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ ಕಡತದಲ್ಲಿ ಪ್ರಸ್ತಾವಿಸಲಾಗಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಅನುದಾನವನ್ನು ಬಿಡುಗಡೆಗೊಳಿಸುವ ಸಂಬಂಧ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 135 ವೆಚ್ಚ 6/2022 ಇ ದಿನಾಂಕ:16ನೇ ಮಾರ್ಚ್ 2022

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಕೋಷ್ಟಕದ ಕಾಲಂ 2ರ ಜಿಲ್ಲಾ ಪಂಚಾಯಿತಿಗೆ ಕಾಲಂ 3 ಕಾರ್ಯಕ್ರಮದಡಿ ಅಗತ್ಯ ವೇತನೇತರ ವೆಚ್ಚಕ್ಕಾಗಿ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಕಾಲಂ 5ರನ್ವಯ ಒಟ್ಟು ರೂ6.91ಲಕ್ಷ (ರೂಪಾಯಿ ಆರು ಲಕ್ಷದ ತೊಂಬತ್ತೊಂದು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ.ಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2851-00-196-2-01ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು |
|---|---|---|---|---|
| 1 | ವಿಜಯಪುರ–414 | 2851-00-107-0-27-033 | 6.91 | 6.91 |
| | ಒಟ್ಟು | | | 6.91 |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್ ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಕೃಷಿ ಇಲಾಖೆ.
3. ಆಯುಕ್ತರು, ಖಜಾನೆ ಆಯುಕ್ತಾಲಯ, 5 & 6ನೇ ಮಹಡಿ, ಕೆಪಿಟಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ವಿಜಯಪುರ.
5. ಜಿಲ್ಲಾ ಖಜಾನಾಧಿಕಾರಿಗಳು, ವಿಜಯಪುರ.
6. ಶಾಖಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ 1)ರವರ ಕಡತಕ್ಕೆ.
7. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ.